ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 252

ಸದಸ್ಯರ ಹೆಸರು : ಶ್ರೀ ಬಿ.ಜಿ.ಪಾಟೀಲ್
(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

ಉತ್ತರಿಸುವ ದಿನಾಂಕ : 14.09.2021

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಕೋವಿಡ್-19ರ ಹಿನ್ನೆಲೆಯಲ್ಲಿ ಇನ್ವೆಸ್ಟ್ ಕರ್ನಾಟಕ-2020 ಜಾಗತಿಕ ಹೂಡಿಕೆದಾರರ ಸಮಾವೇಶವನ್ನು ಆಯೋಜಿಸಲು ಸಾಧ್ಯವಾಗಿಲ್ಲದೆ ಕಾರಣ, ಈ ಸಮಾವೇಶವನ್ನು ಪ್ರಸಕ್ತ ಸಾಲಿನಲ್ಲಿ ಆಯೋಜಿಸಲಾಗುವುದೇ; (ವಿವರ ನೀಡುವುದು)	ಸರ್ಕಾರದ ಆದೇಶ ಸಂಖ್ಯೆ ಸಿಐ 129 ಎಸ್‌ಪಿಐ 2021, ದಿನಾಂಕ 23.07.2021ರಲ್ಲಿ "ಇನ್‌ವೆಸ್ಟ್ ಕರ್ನಾಟಕ 2022:ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ"ವನ್ನು 2022ರ ಫೆಬ್ರವರಿ 9 ರಿಂದ 11 ರವರೆಗೆ ಬೆಂಗಳೂರಿನಲ್ಲಿ ಆಯೋಜಿಸಲು ಆಡಳಿತಾತ್ಮಕ ಅನುಮೋದನೆ ನೀಡಿದೆ. ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶವನ್ನು ಆಯೋಜಿಸಲು ಪೂರ್ವ ಸಿದ್ಧತೆಗಳಿಗಾಗಿ ಕನಿಷ್ಠ 1 ವರ್ಷ ಬೇಕಾಗಿರುವುದರಿಂದ ಹಾಗೂ ಕೋವಿಡ್-19 ಸಾಂಕ್ರಾಮಿಕದ ಹಿನ್ನೆಲೆಯಲ್ಲಿ ಫೆಬ್ರವರಿ 2022ರಲ್ಲಿ ಸದರಿ ಸಮಾವೇಶವನ್ನು ಆಯೋಜಿಸಲು ಕಷ್ಟಸಾಧ್ಯವಾಗಿರುವುದರಿಂದ, 2022ರ ಸಾಲಿನ ಮುಂದಿನ ಬೇರೆ ಮಾಹೆಯಲ್ಲಿ ಈ ಸಮಾವೇಶವನ್ನು ಆಯೋಜಿಸುವ ಸಂಬಂಧ ಪರಿಶೀಲಿಸಲಾಗುತ್ತಿದೆ.
ಆ	ಆಯೋಜಿಸಿದ್ದಲ್ಲಿ, ಎಲ್ಲಿ ಮತ್ತು ಯಾವಾಗ ಆಯೋಜಿಸಲಾಗುವುದು; (ವಿವರ ನೀಡುವುದು)	
ಇ	ಹೂಡಿಕೆದಾರರು ಬಂಡವಾಳ ಹೂಡಲು ಮುಂದಾದಲ್ಲಿ ಹೂಡಿಕೆದಾರರಿಗೆ ರಾಜ್ಯ ಸರ್ಕಾರದಿಂದ ಸಿಗುವ ರಿಯಾಯಿತಿಗಳೇನು? (ವಿವರ ನೀಡುವುದು)	ರಾಜ್ಯದಲ್ಲಿ ಸಮಗ್ರ ಕೈಗಾರಿಕಾಭಿವೃದ್ಧಿಗೆ ನೂತನ ಕೈಗಾರಿಕಾ ನೀತಿ 2020-25ನ್ನು ದಿನಾಂಕ 13.08.2020 ರಿಂದ ಜಾರಿಗೆ ತರಲಾಗಿದೆ. ಸದರಿ ನೀತಿಯಡಿ ರಾಜ್ಯದಲ್ಲಿ ಬಂಡವಾಳ ಹೂಡುವ ಕೈಗಾರಿಕೆಗಳಿಗೆ ಈ ಕೆಳಕಂಡ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ನೀಡಲು ಅವಕಾಶ ಕಲ್ಪಿಸಿದೆ. 1. ಮುದ್ರಾಂಕ ಶುಲ್ಕ ವಿನಾಯಿತಿ ಮತ್ತು ನೋಂದಣಿ ಶುಲ್ಕ ರಿಯಾಯಿತಿ. 2. ಭೂ ಪರಿವರ್ತನಾ ಶುಲ್ಕ ಮರುಪಾವತಿ. 3. ವಹಿವಾಟಿನ ಮೇಲೆ ಬಂಡವಾಳ ಹೂಡಿಕೆ ಸಹಾಯಧನ. 4. ಇಟಿಪಿ ಘಟಕ ಸಹಾಯಧನ. 5. ಅಂಕರ್ ಘಟಕ ಸಹಾಯಧನ. 6. ಎಂಎಸ್‌ಎಂಇಗಳಿಗೆ ವಿದ್ಯುತ್‌ಚ್ಛಕ್ತಿ ತೆರಿಗೆ ವಿನಾಯಿತಿ

		ಮುಂದುವರೆದಂತೆ, ವಿವಿಧ ವಲಯಗಳ ಕೈಗಾರಿಕಾಭಿವೃದ್ಧಿಗೆ ಕರ್ನಾಟಕ ಏರೋಸ್ಪೇಸ್ ನೀತಿ 2013–23, ಕರ್ನಾಟಕ ಎಲೆಕ್ಟ್ರಿಕಲ್ ವೆಹಿಕಲ್ ಮತ್ತು ಎನರ್ಜಿ ಸ್ಟೋರೇಜ್ ಪಾಲಿಸಿ–2017, ನ್ಯೂ ಗಾರ್ಮೆಂಟ್ & ಟೆಕ್ಸ್‌ಟೈಲ್ ಪಾಲಿಸಿ, 2019 ಜಾರಿಯಲ್ಲಿದ್ದು, ಸದರಿ ನೀತಿಗಳಲ್ಲಿ ಸಹ ವಿವಿಧ ಪ್ರೋತ್ಸಾಹ ಮತ್ತು ರಿಯಾಯಿತಿ ನೀಡಲು ಅವಕಾಶ ಕಲ್ಪಿಸಿದೆ.

ಸಿಐ 260 ಎಸ್‌ಪಿಐ 2021

(ಮುರುಗೇಶ ಆರ್. ನಿರಾಣಿ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು